ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 171
ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 17.07.2019
ಉತ್ತರಿಸುವ ಸಚಿವರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಚಾಮರಾಜನಗರ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು ; ಇವುಗಳಲ್ಲಿ ಸ್ವಂತ ಕಟ್ಟಡ ಇಲ್ಲದ ಅಂಗನವಾಡಿ ಕೇಂದ್ರಗಳೆಷ್ಟು ; (ವಿವರ ನೀಡುವುದು)	ಚಾಮರಾಜನಗರ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳು: 1421 ಸ್ವಂತ ಕಟ್ಟಡ ಇಲ್ಲದ ಅಂಗನವಾಡಿ ಕೇಂದ್ರಗಳು: 242
ಆ)	ಕಳೆದ 5 ವರ್ಷಗಳಿಂದ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆಂದು ಲಭ್ಯವಿರುವ ಅನುದಾನದಲ್ಲಿ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ (ವಿವರ ನೀಡುವುದು)	ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗಾಗಿ ಇರುವ ವಿಶೇಷ ಅಭಿವೃದ್ಧಿಯೋಜನೆಯಡಿಯಲ್ಲಿ ಕಳೆದ 5 ವರ್ಷಗಳಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ 25 ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ರೂ. 265.52 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ.
ಇ)	ಈ ಅನುದಾನದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳನ್ನು ನಿರ್ಮಿಸಲಾಗಿದೆ (ವಿವರ ನೀಡುವುದು)	9 ಕಟ್ಟಡಗಳು ಪೂರ್ಣಗೊಂಡಿರುತ್ತದೆ. ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ.
ಈ)	ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳಿಗೆ ಯವಾಗ ಕಟ್ಟಡಗಳನ್ನು ನಿರ್ಮಿಸಲಾಗುವುದು? (ವಿವರ ನೀಡುವುದು)	ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳಿಗೆ ಕೆಳಕಂಡ ಯೋಜನೆಗಳಡಿಯಲ್ಲಿ ಅನುದಾನ ಲಭ್ಯತೆ ಮತ್ತು ನಿವೇಶನ ಲಭ್ಯತೆಗನುಗುಣವಾಗಿ ಹಂತಹಂತವಾಗಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಕ್ರಮವಹಿಸಲಾಗುತ್ತಿದೆ. 1) ನರೇಗಾ 2) ಎಸ್.ಡಿ.ಪಿ. ರಾಜ್ಯದಲ್ಲಿ 450 ಕಟ್ಟಡಗಳನ್ನು ನಗರ ಪ್ರದೇಶದಲ್ಲಿ ನಿರ್ಮಿಸುವ ಬಗ್ಗೆ ಕ್ರಮವಹಿಸಲಾಗುತ್ತಿದೆ. ನಿವೇಶನವಿಲ್ಲದಿರುವ ಪ್ರದೇಶಗಳಲ್ಲಿ ನಿವೇಶನ ನೀಡಲು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ.

ಸಂ:ಮಮಇ 81 ಐಸಿಡಿ 2019

(ಡಾ॥ ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ,
ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ಸಚಿವರು